## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ/454/ಗ್ರಾಪಂಅ/2020 ದಿನಾಂಕ: 23.12.2020

6912
18/01/2021

## ಸುತ್ತೋಲೆ

3660
02/02

ವಿಷಯ: ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶ ಕಾರ್ಯಕ್ರಮವು ಸೇರಿದಂತೆ) ತ್ರೈಮಾಸಿಕ ಪರಿಶೀಲನಾ ಸಮಿತಿ ಸಭೆಗೆ ಗ್ರಾಮೀಣ ವಿದ್ಯುದೀಕರಣ/ ವಿದ್ಯುಚ್ಛಕ್ತಿ ಮತ್ತು ಇಂಧನ ಇಲಾಖೆಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ನಮೂನೆಗಳಲ್ಲಿ ಮಾಹಿತಿ ಪಡೆದು ಪರಿಣಾಮಕಾರಿ ಪರಿಶೀಲನೆ-ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 479 ಗ್ರಾಪಂಅ 2019, ದಿನಾಂಕ: 11.06.2019.

*******

ಸಂವಿಧಾನದ 71 ನೇ ತಿದ್ದುಪಡಿಯ ಆಶೋತ್ತರಗಳಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ವಿವಿಧ ಅಭಿವೃದ್ಧಿ ಕಾರ್ಯಕ್ರಗಳ ಜವಾಬ್ದಾರಿಗಳನ್ನು ಪಂಚಾಯತ್ ರಾಜ್ ಸಂಸ್ಥೆಗಳಿಗೆ ವರ್ಗಾಯಿಸಲಾಗಿರುತ್ತದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿವಿಧ ಅಭಿವೃದ್ಧಿ ಯೋಜನೆಗಳಡಿ ಪಂಚಾಯತ್ ರಾಜ್ ಸಂಸ್ಥೆಗಳಿಗೆ ವಿದ್ಯುಚ್ಛಕ್ತಿ ಮತ್ತು ಇಂಧನ ಇಲಾಖೆಯಿಂದ ಬಿಡುಗಡೆಗೊಳಿಸುತ್ತಿರುವ ಅನುದಾನಗಳನ್ನು ಸಮರ್ಪಕವಾಗಿ ಬಳಸಿಕೊಂಡು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿವೆ.

ಗ್ರಾಮ ಪಂಚಾಯತಿ ಮಟ್ಟದಲ್ಲಿ ತ್ರೈಮಾಸಿಕ ಪರಿಶೀಲನಾ ಕೆ.ಡಿ.ಪಿ ಸಮಿತಿಗೆ ಗ್ರಾಮೀಣ ವಿದ್ಯುದೀಕರಣ/ ವಿದ್ಯುಚ್ಛಕ್ತಿ ಮತ್ತು ಇಂಧನ ಇಲಾಖೆಯ ಹೋಬಳಿ/ ಗ್ರಾಮ ಪಂಚಾಯತಿ ಮಟ್ಟದಲ್ಲಿನ ಸ್ಥಳೀಯ ಅಧಿಕಾರಿ/ ಸಿಬ್ಬಂದಿಗಳಿಂದ ವಿದ್ಯುಚ್ಛಕ್ತಿ ಮತ್ತು ಇಂಧನ ಇಲಾಖೆಗೆ ಸಂಬಂಧಿಸಿದ ಯೋಜನೆ ಮತ್ತು ಅನುದಾನದ ವಿವರಗಳನ್ನು ಹಾಗೂ ಇವುಗಳ ಅನುಷ್ಠಾನದಲ್ಲಿ ಸಾಧಿಸಿರುವ ಭೌತಿಕ ಮತ್ತು ಆರ್ಥಿಕ ಪ್ರಗತಿಯನ್ನು ಪರಾಮರ್ಶಿಸುವುದು ಹಾಗೂ ವಿದ್ಯುಚ್ಛಕ್ತಿ ಮತ್ತು ಇಂಧನ ಇಲಾಖೆಯ ಯೋಜನೆಗಳ ಅನುಷ್ಠಾನಕ್ಕೆ ಸೂಕ್ತ ಮಾರ್ಗದರ್ಶನ ನೀಡುವ ಉದ್ದೇಶವನ್ನು ಸರ್ಕಾರ ಹೊಂದಿದೆ.

ಮೇಲೆ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ರಾಜ್ಯದ ಪ್ರತಿಯೊಂದು ಗ್ರಾಮ ಪಂಚಾಯತಿ ಮಟ್ಟದಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಮಿತಿಯನ್ನು ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 479 ಗ್ರಾಪಂಅ 2019, ದಿನಾಂಕ: 11-06-2019 ರಂದು ರಚಿಸಲಾಗಿದೆ. ಅದರನ್ವಯ ವಿದ್ಯುಚ್ಛಕ್ತಿ ಮತ್ತು ಇಂಧನ ಇಲಾಖೆಯ ಕ್ಷೇತ್ರಮಟ್ಟದ ಎಸ್ಕಾಂ ಸಿಬ್ಬಂದಿರವರು ಆಹ್ವಾನಿತರಾಗಿರುತ್ತಾರೆ ಎಂದು ಆದೇಶಿಸಲಾಗಿದೆ.

**ವಿದ್ಯುಚ್ಛಕ್ತಿ ಮತ್ತು ಇಂಧನ:**

ರಾಜ್ಯ ಸರ್ಕಾರದ ಯೋಜನೆಗಳಾದ ಕುಡಿಯುವ ನೀರು ಸರಬರಾಜು ಯೋಜನೆಯನ್ನು ಹೆಚ್ಚು ಚೇತನಗೊಳಿಸುವುದು, ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿಗಳ ವಿದ್ಯುದೀಕರಣ ಯೋಜನೆಗಳಿಂದ ವಿತರಣಾ ಮೂಲಸೌಕರ್ಯ ವೃದ್ಧಿ ಮತ್ತು ಬಲವರ್ಧನೆ ಮಾಡುವ ಉದ್ದೇಶವನ್ನು ಹೊಂದಿದೆ.

ಗ್ರಾಮ ಪಂಚಾಯತಿ ವ್ಯಾಪ್ತಿಗೆ ಸಂಬಂಧಿಸಿದಂತೆ ಇಲಾಖೆಯ ಮೂಲ ಅಂಕಿ-ಅಂಶಗಳನ್ನು ಪ್ರತಿ ಸಾಲಿನಲ್ಲಿಯೂ ಇಂದೀಕರಿಸಿ ಒದಗಿಸುವುದು. ಜನವಸತಿ, ವಾರ್ಡ್ ಸಭೆ ಹಾಗೂ ಗ್ರಾಮ ಸಭೆ ಮೂಲಕ 5 ವರ್ಷಕ್ಕೆ ದೂರದೃಷ್ಟಿ ಯೋಜನೆ

ತಯಾರಿಸಿ ಅದರಿಂದ ವಾರ್ಷಿಕ ಯೋಜನೆಗಳನ್ನು ರೂಪಿಸುವಾಗ ಆದ್ಯತಾ ಪಟ್ಟಿ ಮಾಡುವಾಗ ಈ ಕೆಳಗಿನ ಅಂಶಗಳನ್ನು ಕೇಂದ್ರೀಕರಿಸಿ ವಿದ್ಯುಚ್ಛಕ್ತಿ ಮತ್ತು ಇಂಧನ ಇಲಾಖೆಯು ಕ್ರಮ ಕೈಗೊಳ್ಳುವುದು.

1) ವಿದ್ಯುತ್ ಪೂರೈಕೆಯಲ್ಲಿ ಅಡಚಣೆ / ವ್ಯತ್ಯಯಗಳು, ಕಾರಣಗಳು ಮತ್ತು ಪರಿಹಾರ ಕ್ರಮಗಳನ್ನು ಕೈಗೊಳ್ಳುವುದು
2) ಸಾಂಪ್ರದಾಯಿಕ ಮತ್ತು ಸಾಂಪ್ರದಾಯಿಕವಲ್ಲದ ಇಂಧನಗಳ ಉತ್ಪಾದನೆಗೆ ಉತ್ತೇಜನ ನೀಡುವುದು
3) ವಿದ್ಯುತ್ ಪೂರೈಕೆಯ ವೇಳಾಪಟ್ಟಿಗಳನ್ನು ಸಿದ್ಧಪಡಿಸಿ, ಮಾಹಿತಿ ನೀಡುವುದು.
4) ಶಿಥಿಲಗೊಂಡ ಕಂಬಗಳ ಬದಲೀಕರಣ ಮಾಡುವುದು
5) ವಿಫಲಗೊಂಡ ಪರಿವರ್ತಕಗಳ ಬದಲಾವಣೆ ಮಾಡುವುದು
6) ಗ್ರಾಹಕರ ಸ್ಥಾವರಗಳಿಗೆ ಮಾಪಕ ಅಳವಡಿಸಲು ಕ್ರಮ ಕೈಗೊಳ್ಳುವುದು
7) ಸೌರ ಮೇಲ್ಛಾವಣಿಗಳಿಗೆ ಉತ್ತೇಜನ ನೀಡುವುದು
8) ಗ್ರಾಮೀಣ ಭಾಗದಲ್ಲಿ ವಿತರಣಾ ಮೂಲಸೌಕರ್ಯಗಳ ಬಗ್ಗೆ ಕ್ರಮ ಕೈಗೊಳ್ಳುವುದು

ಮೇಲ್ಕಂಡ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಗ್ರಾಮ ಪಂಚಾಯತಿ ಕೆ.ಡಿ.ಪಿ ಸಭೆಗೆ ಗ್ರಾಮೀಣ ವಿದ್ಯುದೀಕರಣ/ ವಿದ್ಯುಚ್ಛಕ್ತಿ ಮತ್ತು ಇಂಧನ ಇಲಾಖೆಯ ಕ್ಷೇತ್ರಮಟ್ಟದ ಎಸ್ಕಾಂ ಸಿಬ್ಬಂದಿರವರು ನಮೂನೆ-1 ರಲ್ಲಿನ ಮಾಹಿತಿಯೊಂದಿಗೆ ಸಭೆಗೆ ಕಡ್ಡಾಯವಾಗಿ ಹಾಜರಾಗಲು ಆದೇಶಿಸಿದೆ.

| | |
|---|---|
| (ಉಮಾ ಮಹದೇವನ್) | (ಮಹೇಂದ್ರ ಜೈನ್) |
| ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ |
| ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಇಂಧನ ಇಲಾಖೆ |

ಗೆ:

1. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಕೆ.ಆರ್ ವೃತ್ತ, ಬೆಂಗಳೂರು – 560 001
2. ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ವಿಜಯನಗರ 2ನೇ ಹಂತ, ಮೈಸೂರು – 560 017
3. ವ್ಯವಸ್ಥಾಪಕ ನಿರ್ದೇಶಕರು, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ, ಕವೂರ್ ಕ್ರಾಸ್ ರಸ್ತೆ, ಬಿಜೈ ಅಂಚೆ, ಮಂಗಳೂರು – 575 004
4. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ನವನಗರ, ಹುಬ್ಬಳ್ಳಿ – 580 025
5. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಸ್ಟೇಷನ್ ಮುಖ್ಯ ರಸ್ತೆ, ಕಲಬುರ್ಗಿ – 585 102
6. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
7. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
8. ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು (ಈ ಸುತ್ತೋಲೆಯನ್ನು ತಾಲ್ಲೂಕು ಮಟ್ಟದ ಎಲ್ಲಾ ಇಲಾಖಾಧಿಕಾರಿಗಳಿಗೆ ಹಾಗೂ ಎಲ್ಲಾ ಗ್ರಾಮ ಪಂಚಾಯತ್ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ರವರಿಗೆ ಕಳುಹಿಸಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ನಡೆಯುವ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳು (ಕೆ.ಡಿ.ಪಿ) ಪ್ರಗತಿ ಪರಿಶೀಲನಾ ಸಭೆಗೆ ಹೋಬಳಿ/ ಗ್ರಾಮ ಪಂಚಾಯತಿ ಮಟ್ಟದ ಅಧಿಕಾರಿ/ ನೌಕರರು ಹಾಜರಾಗಲು ನಿರ್ದೇಶನ ನೀಡುವುದು).

ಪ್ರತಿ ಮಾಹಿತಿಗಾಗಿ:

1. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಎಲ್ಲಾ ಆಯುಕ್ತರು/ ವ್ಯವಸ್ಥಾಪಕ ನಿರ್ದೇಶಕರುಗಳು, ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
10. ~~ವಿಶೇಷ ಅಧಿಕಾರಿ (ಜಿ.ಪಂ), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.~~
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ಮುಖ್ಯಸ್ಥರು, ವಿಕೇಂದ್ರೀಕರಣ ವಿಶ್ಲೇಷಣಾ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
13. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್ ಸೈಟ್, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
14. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

**ನಮೂನೆ-1**

**2020-21 ನೇ ಸಾಲಿನಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮದಡಿ ಗ್ರಾಮೀಣ ವಿದ್ಯುದೀಕರಣ/ ವಿದ್ಯುಚ್ಛಕ್ತಿ ಮತ್ತು ಇಂಧನ ಇಲಾಖೆಯು ಸಾಧಿಸಿರುವ ಭೌತಿಕ ಮತ್ತು ಆರ್ಥಿಕ ಪರಾಮರ್ಶೆಯ ವಿವರಗಳು**

| ಗ್ರಾಮ ಪಂಚಾಯತಿ ವ್ಯಾಪ್ತಿಗೆ ಸೀಮಿತವಾಗಿರುವಂತೆ |
|---|

ಪಂಚಾಯತ್ ಹೆಸರು:____________________ ________ ಮಾಹೆಯ ಅಂತ್ಯದವರೆವಿಗೆ

| ಕ್ರ. ಸಂ | ಇಲಾಖೆಯ ಕಾರ್ಯಕ್ರಮಗಳ ವಿವರ | ಭೌತಿಕ ಪ್ರಗತಿ (ಸಂಖ್ಯೆಗಳಲ್ಲಿ) | | ಆರ್ಥಿಕ ಪ್ರಗತಿ (ರೂ. ಲಕ್ಷಗಳಲ್ಲಿ) | |
|---|---|---|---|---|---|
| | | ಗುರಿ | ಸಾಧನೆ | ಲಭ್ಯವಿರುವ ಅನುದಾನ | ಸಾಧಿಸಿರುವ ಪ್ರಗತಿ |
| 1 | ಕುಡಿಯುವ ನೀರಿನ ಯೋಜನೆಗಳ ವಿದ್ಯುದೀಕರಣ | | | | |
| 2 | ಗಂಗಾ ಕಲ್ಯಾಣ ಯೋಜನೆಯ ಪಂಪ್‌ಸೆಟ್‌ಗಳ ವಿದ್ಯುದೀಕರಣ | | | | |
| 3 | ಶಿಥಿಲಗೊಂಡ ಕಂಬಗಳ ಬದಲಾವಣೆ | | | | |
| 4 | ಶಿಥಿಲಗೊಂಡ ವಿದ್ಯುತ್ ಮಾರ್ಗಗಳ ಬದಲಾವಣೆ | | | | |
| 5 | ವಿಫಲಗೊಂಡ ಪರಿವರ್ತಕಗಳ ಬದಲಾವಣೆ | | | | |
| 6 | ಇತರೆ | | | | |
| ಒಟ್ಟು | | | | | |

- ಆರ್ಥಿಕ ಗುರಿ ಪ್ರಗತಿ ಲಭ್ಯವಾಗದ ಯೋಜನೆಗಳಡಿ ಭೌತಿಕ ಪ್ರಗತಿ ಮಾಹಿತಿ ನೀಡುವುದು.

ಮೆಮೋ: ಪ್ರವ್ಯ(ತಾ)/ಉಪ್ರವ್ಯ(ತಾ)/ಸಪ್ರವ್ಯ(ತಾ)–1/2020–21/CYS-1612 ದಿನಾಂಕ: 16 FEB 2021

<u>ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ</u> :

1. ಮುಖ್ಯ ಇಂಜಿನಿಯರ್(ವಿ), ಕಾ ಮತ್ತು ಪಾ ವಲಯ, ಚಾವಿಸನಿನಿ, ಮೈಸೂರು/ಹಾಸನ.
2. ಎಲ್ಲಾ ಅಧೀಕ್ಷಕ ಇಂಜಿನಿಯರ್, ಕಾ ಮತ್ತು ಪಾ ವೃತ್ತ, ಚಾವಿಸನಿನಿ.
3. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾ ಮತ್ತು ಪಾ ವಿಭಾಗ, ಚಾವಿಸನಿನಿ.
4. ಉಪ ಪ್ರಧಾನ ವ್ಯವಸ್ಥಾಪಕರು, ಎಂ.ಐ.ಎಸ್., ನಿಗಮ ಕಛೇರಿ, ಚಾವಿಸನಿನಿ, ಮೈಸೂರು ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
5. ಆಪ್ತ ಸಹಾಯಕರು ವ್ಯವಸ್ಥಾಪಕ ನಿರ್ದೇಶಕರು ಇವರ ಗಮನಕ್ಕೆ ಹಾಗೂ ವಿಷಯವನ್ನು ವ್ಯ.ನಿ ರವರ ಗಮನಕ್ಕೆ ತರುವುದು.

ಮುಖ್ಯ ಕಡತ/ಕಛೇರಿ ಕಡತ.

16/2/21

ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ),
ಚಾ.ವಿ.ಸ.ನಿ.ನಿ., ಮೈಸೂರು.